# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು

Office of the Deputy Commissioner, Mysore District, Mysore

ದೂರವಾಣಿ ಸಂಖ್ಯೆ: 0821-2422110, 2424079, 2428383. ಫ್ಯಾಕ್ಸ್: 0821-2429012

ಸಂಖ್ಯೆ.ಎ.ಎಲ್.ಎನ್.(3)ಸಿಆರ್217 /2009-10 ದಿನಾಂಕ.06-02-2010

## ಅಧಿಕೃತ ಜ್ಞಾಪನ

ವಿಷಯಃ ಮೈಸೂರು ತಾಲ್ಲೂಕು, ವರುಣ ಹೋಬಳಿ, ಸರ್ಕಾರಿ ಉತ್ತನಹಳ್ಳಿ ಗ್ರಾಮದ ಸನಂ. 146/2ಬಿ ರಲ್ಲಿ 1-31 ಎಕರೆ ವಸತಿ ಉದ್ದೇಶಕ್ಕಾಗಿ ಶ್ರೀ ಸಿ.ಬಾಲಚಂದ್ರ ಬಿನ್ ಬಿ.ಎನ್.ಚಂದ್ರಶೇಖರ್, ನಂ.12, 2ನೇ ಹಂತ, ಎಸ್.ಎನ್.ಲೇಔಟ್, ಮಹಾಲಕ್ಷ್ಮಿಪುರಂ, ಬೆಂಗಳೂರು. ರವರು ಭೂ ಪರಿವರ್ತನೆ ಕೋರಿ ಅರ್ಜಿ ಸಲ್ಲಿಸಿರುವ ಬಗ್ಗೆ.

ಉಲ್ಲೇಖಃ1 ಸರ್ಕಾರದ ಸುತ್ತೋಲೆ ಸಂಖ್ಯೆ. ಆರ್.ಡಿ.7 ಎಲ್.ಜಿ.ಪಿ. 95 ದಿನಾಂಕ. 7-6-1999 ಮತ್ತು ದಿನಾಂಕ.10-9-2008ರ ಸುತ್ತೋಲೆ ಸಂಖ್ಯೆ. ಆರ್.ಡಿ. 56 ಎಲ್.ಜಿ.ಪಿ. 2008

2 ತಹಶೀಲ್ದಾರ್, ಮೈಸೂರು ರವರ ವರದಿ ಸಂಖ್ಯೆ ಎಎಲ್ಎನ್ (2) ಸಿಆರ್ 229/09-10 ದಿ: 02-12-2009.

3 ಭೂಪರಿವರ್ತನಾ ಶುಲ್ಕ ರೂ.58042-00, ಮತ್ತು ಪೋಡಿ ಫೀ ರೂ.55-00 ಒಟ್ಟು ರೂ.58097-00 ನ್ನು ಚಲನ್ ನಂ. 812, 829 ದಿನಾಂಕ 01-02-2010 ರಂದು ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಪ್ರಧಾನ ಶಾಖೆ, ಮೈಸೂರು ಬ್ಯಾಂಕಿನಲ್ಲಿ ಅರ್ಜಿದಾರರು ಜಮಾ ಮಾಡಿರುತ್ತಾರೆ.

*****

ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 95(2) ಮತ್ತು 95(7)ರ ಷರತ್ತುಗಳು ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ ( ತಿದ್ದುಪಡಿ) ನಿಯಮಗಳು 1994ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ.32700-00( ಮೂವತ್ತೆರಡು ಸಾವಿರದ ಏಳು ನೂರು ರೂಪಾಯಿಗಳು ಮಾತ್ರ) ಗಳಂತೆ ಅರ್ಜಿದಾರರು ಉಲ್ಲೇಖ(3)ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀ ಸಿ.ಬಾಲಚಂದ್ರ ಬಿನ್ ಬಿ.ಎನ್.ಚಂದ್ರಶೇಖರ್, ನಂ.12, 2ನೇ ಹಂತ, ಎಸ್.ಎನ್.ಲೇಔಟ್, ಮಹಾಲಕ್ಷ್ಮಿಪುರಂ, ಬೆಂಗಳೂರು. ರವರ ಅರ್ಜಿಯನ್ನು ಪರಿಗಣಿಸಿ , ಮೈಸೂರು ತಾಲ್ಲೂಕು, ವರುಣ ಹೋಬಳಿ, ಸರ್ಕಾರಿ ಉತ್ತನಹಳ್ಳಿ ಗ್ರಾಮದ ಸನಂ. 146/2ಬಿ ರಲ್ಲಿ 1-31 ಎಕರೆ ವಸತಿ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ನಗರ ಯೋಜನಾ ಸದಸ್ಯರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು / ಮಾಲಿನ್ಯ ನಿಯಂತ್ರಣಾ ಮಂಡಳಿ ಗ್ರಾಮ ಪಂಚಾಯಿತಿಗಳಿಂದ ಮಂಜೂರಾತಿಯನ್ನು ಪಡೆಯದ ಹೊರತುಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.
2. ಈ ಭೂ ಪರಿವರ್ತಿತ ಜಮೀನನ್ನು ವಸತಿ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳತಕ್ಕದ್ದು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ನಗರ ಯೋಜನಾ ಸದಸ್ಯರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು /ಮಾಲಿನ್ಯ ನಿಯಂತ್ರಣಾ ಮಂಡಳಿ ಇತ್ಯಾದಿ ರವರಿಂದ ಅನುಮೋದಿಸಿಕೊಂಡು ಆನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನನ್ನು ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್ ಖಾಲಿ ಜಾಗ ಇತ್ಯಾದಿಗಳನ್ನು ನಗರ ಯೋಜನಾ ಸದಸ್ಯರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು /ಇತ್ಯಾದಿ ರವರಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುತ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

6. ಈ ಜಮೀನಿಗೆ ತಾಕು ಫೂಟ್ ಖರಾಬ್ ಜಮೀನು ಇದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು ಹಾಗೂ ಪ್ರಸ್ತುತ ಭೂ ಪರಿವರ್ತನೆಗೆ ಒಳಪಟ್ಟಿರುವ ಸರ್ವೆ ನಂ. ನಲ್ಲಿನ ``ಎ`` ಖರಾಬ್ ವಿಸ್ತೀರ್ಣಕ್ಕೆ ಮಾರುಕಟ್ಟೆ ದರ ಮತ್ತು ಭೂ ಪರಿವರ್ತನೆ ಶುಲ್ಕ ಪಾವತಿಸಿಕೊಳ್ಳಲಾಗಿದ್ದು ವಸತಿ ಉದ್ದೇಶಕ್ಕಾಗಿ ಬಳಸಲು ಭೂ ಪರಿವರ್ತನೆ ನೀಡಿದೆ ಹಾಗೂ `` ಬಿ `` ಖರಾಬಿನಲ್ಲಿ ಬರುವ ಕಾರಣ ಇದನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗದೆ ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿಲ್ಲ ಈ ``ಬಿ `` ಖರಾಬಿನ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ, ತಹಶೀಲ್ದಾರ್ ರವರು ಈ ಬಾಬ್ತು ಆರ್.ಟಿ.ಸಿ. ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

7. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯುಡಿ 7556-665 ಆರ್ ಮತ್ತು ಬಿ 6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ.ಪಿ1/7(11)67 ದಿನಾಂಕ.1-1-1966 ರಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂದಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್ ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂದಿಸಿದ ರಸ್ತೆಯ ಮಧ್ಯಭಾಗದಿಂದು 25 ಮೀಟರ್ ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು

8. ಅರ್ಜಿದಾರರು ನಗರ ಭೂ ಪರಿಮಿತಿ ಕಾಯಿದೆ 1976ರ ವಿಧಿ 6(1)ರ ಪ್ರಕಾರ ಸಕ್ಷಮ ಪ್ರಾಧಿಕಾರದಲ್ಲಿ ಘೋಷಣೆ ಪತ್ರವನ್ನು ಸಲ್ಲಿಸದಿದ್ದಲ್ಲಿ ಈಗ ತಕ್ಷಣ ಅಂತಹ ಘೋಷಣೆ ಪತ್ರವನ್ನು ಸಲ್ಲಿಸತಕ್ಕದ್ದು ಮತ್ತು ಈ ಆದೇಶದ ಪ್ರತಿಯನ್ನು ಸಂಬಂಧಪಟ್ಟ ಭೂ ಪರಿಮಿತಿ ಪ್ರಾಧಿಕಾರಕ್ಕೆ ಕಳುಹಿಸಲಾಗಿದೆ.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ ಅನಿಲ ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕ ಆರೋಗ್ಯಕ್ಕೆ ಯಾವುದೆ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ/ಪರಿಸರ ಇಲಾಖೆಗಳ ಅನುಮತಿ ಹೊಂದಿರತಕ್ಕದ್ದು.

10. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೆ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

# ಷೆಡ್ಯೂಲ್ ವಿವರ

ಮೈಸೂರು ತಾಲ್ಲೂಕು, ವರುಣ ಹೋಬಳಿ, ಸರ್ಕಾರಿ ಉತ್ತನಹಳ್ಳಿ ಗ್ರಾಮದ ಸನಂ: 146/2ಬಿ ರಲ್ಲಿ 1-31 ಎಕರೆ ವಸತಿ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿಗೆ ಚಕ್ಕು ಬಂದಿ.

| ಸ.ನಂ | ವಿಸ್ತೀರ್ಣ | ಪೂರ್ವಕ್ಕೆ | ಪಶ್ಚಿಮಕ್ಕೆ | ಉತ್ತರಕ್ಕೆ | ದಕ್ಷಿಣಕ್ಕೆ |
|---|---|---|---|---|---|
| 146/2ಬಿ | 1-31 | ಹಾಲಿ ರಸ್ತೆ | ಸನಂ. 146/1 ರ ಜಮೀನು | ಸನಂ. 145 ರ ಜಮೀನು | ಸನಂ. 146/2ಎ ರ ಹಿಸ್ಸಾ ಜಮೀನು |

ಸಹಿ/-
ಜಿಲ್ಲಾಧಿಕಾರಿಗಳ ಪರವಾಗಿ,
ಮೈಸೂರು ಜಿಲ್ಲೆ, ಮೈಸೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.

1. ತಹಶೀಲ್ದಾರರು ಮೈಸೂರು ತಾಲ್ಲೂಕು ಮೈಸೂರು ಅವರಿಗೆ ಮೂಲ ಕಡತ್ತ ಹಾಗೂ ಚಲನ್ ನೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಮೈಸೂರು ತಾಲ್ಲೂಕು, ವರುಣ ಹೋಬಳಿ, ಸರ್ಕಾರಿ ಉತ್ತನಹಳ್ಳಿ ಗ್ರಾಮದ ಸನಂ. 146/2ಬಿ ರಲ್ಲಿ 1-31 ಎಕರೆ ವಸತಿ ಉದ್ದೇಶಕ್ಕಾಗಿ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಆರ್.ಟಿ.ಸಿ.ಯಲ್ಲಿ ನಮೂದಿಸತಕ್ಕದ್ದು, ಮತ್ತು ಈ ಜಮೀನಿನ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2. ನಗರ ಯೋಜನಾ ಸದಸ್ಯರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು ರವರಿಗೆ ಸೂಕ್ತ ಕ್ರಮಕ್ಕಾಗಿ.
3. ಉಪವಿಭಾಗಾಧಿಕಾರಿಗಳು ಮೈಸೂರು ಉಪವಿಭಾಗ, ಮೈಸೂರು ರವರಿಗೆ
4. ಉಪ ನಿರ್ದೇಶಕರು ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಮೈಸೂರು ಉಪವಿಭಾಗ, ಮೈಸೂರು
5. ಉಪ ನೋಂದಣಾಧಿಕಾರಿಗಳು, ಮೈಸೂರು ಉತ್ತರ ರವರಿಗೆ
6. ಶ್ರೀ ಸಿ.ಬಾಲಚಂದ್ರ ಬಿನ್ ಬಿ.ಎನ್.ಚಂದ್ರಶೇಖರ್, ನಂ.12, 2ನೇ ಹಂತ, ಎಸ್.ಎನ್.ಲೇಔಟ್, ಮಹಾಲಕ್ಷ್ಮಿಪುರಂ, ಬೆಂಗಳೂರು. ಇವರಿಗೆ ಅಂಚೆ ಮೂಲಕ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ

ಜಿಲ್ಲಾಧಿಕಾರಿಗಳ ಪರವಾಗಿ,
ಮೈಸೂರು ಜಿಲ್ಲೆ, ಮೈಸೂರು.